ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಉದ್ಯಮ)
ದೇವರಾಜ ಅರಸು ಭವನ, 4ನೇ ಮಹಡಿ, ನಂ 16ಡಿ, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು- 52

ಸಂಖ್ಯೆ: ಕ.ಉ.ಅ.ನಿ/ಅರ್ಜಿ/ಸಿ.ಆರ್15/2020-21 ದಿನಾಂಕ:04.08.2020

# ಪ್ರಕಟಣೆ

2020-21ನೇ ಸಾಲಿನಲ್ಲಿ ಉಪ್ಪಾರ ಮತ್ತು ಅದರ ಉಪಜಾತಿಗಳ ಜನರ ಆರ್ಥಿಕ ಅಭಿವೃದ್ಧಿಗಾಗಿ 1. ಸ್ವಯಂ ಉದ್ಯೋಗ ಸಾಲ ಯೋಜನೆ ಮತ್ತು 2. ಅರಿವು ಶೈಕ್ಷಣಿಕ ಸಾಲ ಯೋಜನೆಗಳಲ್ಲಿ ಸಾಲ ಮತ್ತು ಸಹಾಯಧನದ ಸೌಲಭ್ಯ ಪಡೆಯಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಇಚ್ಛಿಸುವ ಈ ಮೇಲ್ಕಂಡ ಜನಾಂಗದವರು ಉಚಿತವಾಗಿ ಅರ್ಜಿ ನಮೂನೆಯನ್ನು ಜಿಲ್ಲಾ ಕಛೇರಿಯಲ್ಲಿ ಅಥವಾ ನಿಗಮದ ವೆಬ್‌ಸೈಟ್‌ನಲ್ಲಿ ಪಡೆದು ಅರ್ಜಿಯೊಂದಿಗೆ ಜಾತಿ ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಮತ್ತು ಫೋಟೋವನ್ನು ಮತ್ತು ವಿದ್ಯಾರ್ಥಿಗಳ ವ್ಯಾಸಂಗದ ದಾಖಲಾತಿಗಳನ್ನು ನಿಗಮದ ವೆಬ್‌ಸೈಟ್ www.dbcdc.karnataka.gov.in ಮೂಲಕ ಆನ್‌ಲೈನ್‌ನಲ್ಲಿ ಅಥವಾ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಸಾಧ್ಯವಾಗದೇ ಇದ್ದಲ್ಲಿ ಭರ್ತಿ ಮಾಡಿದ ಅರ್ಜಿಯನ್ನು ದಾಖಲಾತಿಗಳೊಡನೆ ನಿಮ್ಮ ಜಿಲ್ಲೆಯ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಗೆ ದಿನಾಂಕ: 05.09.2020ರೊಳಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗೆ ನಿಗಮದ ಆಯಾ ಜಿಲ್ಲಾ ಕಛೇರಿಗಳನ್ನು ಅಥವಾ ನಿಗಮದ ಮೇಲ್ಕಂಡ ವೆಬ್‌ಸೈಟ್‌ನಲ್ಲಿ ಸಂಪರ್ಕಿಸುವಂತೆ ತಿಳಿಸಿದೆ.

04/8/20
ವ್ಯವಸ್ಥಾಪಕ ನಿರ್ದೇಶಕರು

ಪ್ರತಿಯನ್ನು:

1. ಸರ್ಕಾರದ ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ, ಈ ಬಗ್ಗೆ ಸರ್ಕಾರದ ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಯವರ ಅವಗಾಹನೆಗೆ ತರುವಂತೆ ಕೋರಿ ಕಳುಹಿಸಿದೆ.
2. ಎಲ್ಲಾ ಸಹಾಯಕ ಪ್ರಧಾನ ವ್ಯವಸ್ಥಾಪಕರು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕಾಗಿ.
4. ಕಂಪ್ಯೂಟರ್ ಪ್ರೋಗ್ರಾಮರ್, ಕೇಂದ್ರ ಕಛೇರಿ ಇವರಿಗೆ ಮಾಹಿತಿಗಾಗಿ ಹಾಗೂ ನಿಗಮದ ವೆಬ್ ಸೈಟ್‌ನಲ್ಲಿ ಅಪ್‌ಲೋಡ್ ಮಾಡುವ ಸಲುವಾಗಿ.
5. ನಿಗಮದ ಸೂಚನಾ ಫಲಕಕ್ಕೆ.